## ಕೌಶಲ್ಯಾಭಿವೃದ್ಧಿ ತರಬೇತಿ ಕಾರ್ಯಕ್ರಮ

ಭಾರತ ಸರ್ಕಾರ, ವಿಶ್ವವಿದ್ಯಾನಿಲಯ ಅನುದಾನ ಆಯೋಗ ಮತ್ತು ಕರ್ನಾಟಕ ರಾಜ್ಯ ಕೌಶಲ್ಯಾಭಿವೃದ್ಧಿ ಮಂಡಳ, ಇವುಗಳ ನಿರ್ದೇಶನದಂತೆ ಕರ್ನಾಟಕ ರಾಜ್ಯ ಮುಕ್ತ ವಿಶ್ವವಿದ್ಯಾನಿಲಯವು ಕ.ರಾ.ಮು.ವಿ.ಯಲ್ಲಿ ಪ್ರವೇಶಾತಿ ಪಡೆದ ವಿದ್ಯಾರ್ಥಿಗಳಿಗೆ ಕೌಶಲ್ಯಾಭಿವೃದ್ಧಿ ತರಬೇತಿ ಕಾರ್ಯಕ್ರಮವನ್ನು 2018-19 ನೇ ಸಾಲಿನಿಂದ ಪ್ರಾರಂಭಿಸಿರುತ್ತದೆ. ಕೌಶಲ್ಯಾಭಿವೃದ್ಧಿ ತರಬೇತಿ ಕಾರ್ಯಕ್ರಮವು ಭಾರತ ಸರ್ಕಾರದ Skill India ದ ಒಂದು ಭಾಗವಾಗಿದೆ. ಕರ್ನಾಟಕ ರಾಜ್ಯ ಮುಕ್ತ ವಿಶ್ವವಿದ್ಯಾನಿಲಯದಲ್ಲಿ ಪ್ರವೇಶಾತಿ ಪಡೆಯುವ ಸ್ನಾತಕ ಮತ್ತು ಸ್ನಾತಕೋತ್ತರ ವಿದ್ಯಾರ್ಥಿಗಳು ಕಡ್ಡಾಯವಾಗಿ ಕೌಶಲ್ಯಾಭಿವೃದ್ಧಿ ತರಬೇತಿಯನ್ನು ಪಡೆಯಬೇಕಾಗಿರುತ್ತದೆ.

ವಿದ್ಯಾರ್ಥಿಗಳು ವಿಶ್ವವಿದ್ಯಾಲಯದಲ್ಲಿ ಪದವಿಯನ್ನು ಅಭ್ಯಾಸ ಮಾಡುವ ಜೊತೆಗೆ ಕೌಶಲ್ಯಾಭಿವೃದ್ಧಿ ತರಬೇತಿಯನ್ನು ಪ್ರಾಯೋಗಿಕವಾಗಿ ಪಡೆದುಕೊಳ್ಳುವ ಮೂಲಕ ವಿದ್ಯಾರ್ಥಿಯು ತಮ್ಮ ಮುಂದಿನ ಉದ್ಯೋಗಾವಕಾಶವನ್ನು ಹೆಚ್ಚಿಸಿಕೊಳ್ಳುವಂತೆ ಮಾಡುವುದು ಈ ತರಬೇತಿಯ ಮುಖ್ಯ ಉದ್ದೇಶವಾಗಿರುತ್ತದೆ.

## ಕೌಶಲ್ಯಾಭಿವೃದ್ಧಿ ತರಬೇತಿಯ ಪಠ್ಯವಿಷಯ

ಕೌಶಲ್ಯಾಭಿವೃದ್ಧಿ ತರಬೇತಿ ಕಾರ್ಯಕ್ರಮಕ್ಕೆ ವಿಶ್ವವಿದ್ಯಾನಿಲಯವು ಪ್ರತ್ಯೇಕವಾಗಿ ಕೌಶಲ್ಯಾಭಿವೃದ್ಧಿ ವಿಷಯಗಳನ್ನು ಸಿದ್ಧಪಡಿಸಿ, ಪ್ರತಿ ವಿಷಯಕ್ಕೂ ವಿಷಯವಾರು ಪರಿಣಿತ ತಜ್ಞರಿಂದ ಪರಿಣಾಮಕಾರಿ ಪಠ್ಯವಿಷಯವನ್ನು ರಚಿಸಿ, ನುರಿತ ಸಂಪನ್ಮೂಲ ವ್ಯಕ್ತಿಗಳಿಂದ ತರಬೇತಿಯನ್ನು ನೀಡುತ್ತಿದೆ. ಕೌಶಲ್ಯಾಭಿವೃದ್ಧಿ ತರಬೇತಿಯ ಪಠ್ಯ ವಿಷಯವನ್ನು ಕ.ರಾ.ಮು.ವಿ.ಯ ಅಂತರ್ಜಾಲದಲ್ಲಿ ಪ್ರಕಟಿಸಲಾಗಿದ್ದು, ವಿದ್ಯಾರ್ಥಿಗಳು ಮುದ್ರಣ ಮಾಡಿಕೊಳ್ಳಬಹುದಾಗಿರುತ್ತದೆ.

**ಕೌಶಲ್ಯಾಭಿವೃದ್ಧಿ ತರಬೇತಿ ಕಾರ್ಯಕ್ರಮದಲ್ಲಿ ಒಟ್ಟು 07 ವಿಷಯಗಳು ಈ ಕೆಳಕಂಡಂತಿರುತ್ತವೆ**

1. Computer Fundamentals
2. Web Designing
3. Multimedia
4. Desktop Publishing
5. Basics of Networking
6. English for Communication and Soft Skills
7. ಆಡಳಿತ ಕನ್ನಡ

## ಕೌಶಲ್ಯಾಭಿವೃದ್ಧಿ ತರಬೇತಿ ವಿಷಯದ ಆಯ್ಕೆಯ ವಿಧಾನ

ವಿದ್ಯಾರ್ಥಿಯು ವಿಶ್ವವಿದ್ಯಾನಿಲಯದಲ್ಲಿ ಪ್ರವೇಶಾತಿ ಪಡೆಯುವ ಸಂದರ್ಭದಲ್ಲಿ, ಪ್ರವೇಶಾತಿ ಅರ್ಜಿಯಲ್ಲಿ ಈ ಮೇಲ್ಕಂಡಂತಿರುವ ಕೌಶಲ್ಯಾಭಿವೃದ್ಧಿ ತರಬೇತಿಯ 7 ವಿಷಯಗಳಲ್ಲಿ ಕಡ್ಡಾಯವಾಗಿ ಯಾವುದಾದರೂ ಒಂದು ವಿಷಯವನ್ನು ಆಯ್ಕೆ ಮಾಡಿಕೊಳ್ಳಬೇಕಾಗಿರುತ್ತದೆ. ವಿದ್ಯಾರ್ಥಿಯು ಮೊದಲನೇ ವರ್ಷದಲ್ಲಿ ಆಯ್ಕೆ ಮಾಡಿಕೊಂಡ ಕೌಶಲ್ಯಾಭಿವೃದ್ಧಿ ತರಬೇತಿಯ ವಿಷಯವನ್ನು ವಿದ್ಯಾರ್ಥಿಯ ಪದವಿ ಮುಗಿಯುವವರೆಗೂ ಅದೇ ವಿಷಯದಲ್ಲಿ ತರಬೇತಿಯನ್ನು ಪಡೆದುಕೊಳ್ಳಬೇಕಾಗಿರುತ್ತದೆ. ಒಂದು ಬಾರಿ ಆಯ್ಕೆ ಮಾಡಿಕೊಂಡ ಕೌಶಲ್ಯಾಭಿವೃದ್ಧಿ ತರಬೇತಿ ವಿಷಯದ ಬದಲಾವಣೆಗೆ ಅವಕಾಶವಿರುವುದಿಲ್ಲ.

## ಕೌಶಲ್ಯಾಭಿವೃದ್ಧಿ ತರಬೇತಿಯನ್ನು ನೀಡುವ ವಿಧಾನ

1. **ಸ್ನಾತಕ ಪದವಿ (ಬಿ.ಎ, ಬಿ.ಕಾಂ)**

   I year- Level-I ಸೈದ್ಧಾಂತಿಕ (Theory)

   II year- Level-II ಸೈದ್ಧಾಂತಿಕ (Theory)

   III year- Level-III ಪ್ರಾಯೋಗಿಕ (Practical)

2. **ಸ್ನಾತಕೋತ್ತರ ಪದವಿ (ಎಂ.ಎ, ಎಂ.ಕಾಂ, ಎಂ.ಎಸ್ಸಿ. ಎಂ.ಬಿ.ಎ, ಬಿ.ಎಡ್)**

   I year- Level-I ಸೈದ್ಧಾಂತಿಕ (Theory)

   II year- Level-II ಪ್ರಾಯೋಗಿಕ (Practical)

3. **ಸ್ನಾತಕ ಪದವಿಯ ಬಿ.ಲಿಬ್.ಐ.ಎಸ್ಸಿ ಮತ್ತು ಸ್ನಾತಕೋತ್ತರ ಪದವಿಯ ಎಂ.ಲಿಬ್.ಐ.ಎಸ್ಸಿ** ವಿದ್ಯಾರ್ಥಿಗಳಿಗೆ ಒಂದು ವರ್ಷದಲ್ಲಿ Level-I ಸೈದ್ಧಾಂತಿಕ (Theory) ತರಬೇತಿಯನ್ನು ಮಾತ್ರ ನೀಡಲಾಗುವುದು.

## ಕೌಶಲ್ಯಾಭಿವೃದ್ಧಿ ತರಬೇತಿಯ ಪ್ರಮಾಣಪತ್ರ

ವಿದ್ಯಾರ್ಥಿಗಳು ಕೌಶಲ್ಯಾಭಿವೃದ್ಧಿ ತರಬೇತಿಯನ್ನು ಆಯ್ಕೆ ಮಾಡಿಕೊಂಡ ನಂತರ, ವಿಶ್ವವಿದ್ಯಾನಿಲಯವು ಆಯಾ ವರ್ಷಗಳಲ್ಲಿ ನೀಡುವ ತರಬೇತಿಯನ್ನು ಪಡೆದುಕೊಂಡ ವಿದ್ಯಾರ್ಥಿಗಳಿಗೆ ಕೌಶಲ್ಯಾಭಿವೃದ್ಧಿ ತರಬೇತಿ ಪ್ರಮಾಣಪತ್ರವನ್ನು ವಿತರಿಸಲಾಗುತ್ತದೆ. ಕಾಲಕಾಲಕ್ಕೆ ನಡೆಯುವ ತರಬೇತಿಯ ಸುತ್ತೋಲೆ, ವೇಳಾಪಟ್ಟಿ ಮತ್ತು ಕೌಶಲ್ಯಾಭಿವೃದ್ಧಿ ತರಬೇತಿಯ ಇನ್ನಿತರ ಮಾಹಿತಿಯನ್ನು ಕರಾಮುವಿಯ ಅಂತರ್ಜಾಲದಲ್ಲಿ ಪ್ರಕಟಿಸಲಾಗುವುದು.